## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ. ಮಂಜುನಾಥ ಭಂಡಾರಿ |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 255 |
| ಉತ್ತರಿಸಬೇಕಾದ ದಿನಾಂಕ | : | 10.12.2024 |
| ಉತ್ತರಿಸಬೇಕಾದ ಸಚಿವರು | : | ಸಹಕಾರ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಿನಾಂಕ:01.01.2024 ರಿಂದ ದಿನಾಂಕ: 31.12.2024 ರವರೆಗೆ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಚುನಾವಣೆ ನಡೆಸಬೇಕಾದ ಸಹಕಾರಿ ಸಂಘಗಳೆಷ್ಟು/ಬ್ಯಾಂಕ್ ಗಳೆಷ್ಟು; ಸಹಕಾರಿ ಕಾಯ್ದೆ ಪ್ರಕಾರ ಚುನಾವಣೆ ನಡೆಸಬೇಕಾದವರು ಯಾರು: (ವಿವರ ನೀಡುವುದು) | ದಿನಾಂಕ: 01.01.2024 ರಿಂದ ದಿನಾಂಕ: 31.12.2024 ರವರೆಗೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 157 ಸಹಕಾರ ಸಂಘಗಳಿಗೆ ಹಾಗೂ 01 ಸಹಕಾರಿ ಬ್ಯಾಂಕಿಗೆ ಒಟ್ಟು 158 ಸಹಕಾರ ಸಂಘಗಳ ಚುನಾವಣೆ ನಡೆಸಬೇಕಾಗಿರುತ್ತದೆ. ಉಡುಪಿ ಜಿಲ್ಲೆಯಲ್ಲಿ ಒಟ್ಟು 138 ಸಹಕಾರ ಸಂಘಗಳಿಗೆ ಚುನಾವಣೆ ನಡೆಸಬೇಕಾಗಿರುತ್ತದೆ. ಸಹಕಾರ ಸಂಘಗಳ ನಿಯಮಗಳು 1960 ರ ನಿಯಮ 13(ಬಿ)ರನ್ವಯ ಸಹಕಾರ ಚುನಾವಣಾ ಪ್ರಾಧಿಕಾರದ ನಿರ್ದೇಶನ ಹಾಗೂ ಮಾರ್ಗಸೂಚಿಯನ್ವಯ ಚುನಾವಣೆ ನಡೆಸಬೇಕಾಗಿರುತ್ತದೆ.<br><br>ತಾಲ್ಲೂಕು ಮಟ್ಟಕ್ಕಿಂತ ಕಡಿಮೆ ಕಾರ್ಯವ್ಯಾಪ್ತಿಯ ಸಹಕಾರ ಸಂಘಗಳಿಗೆ ಆಯಾ ಜಿಲ್ಲೆಯ ಸಹಕಾರ ಸಂಘಗಳ ಉಪನಿಬಂಧಕರು ಜಿಲ್ಲಾ ಚುನಾವಣಾಧಿಕಾರಿಗಳಾಗಿರುತ್ತಾರೆ ಹಾಗೂ ತಾಲ್ಲೂಕು ಮಟ್ಟದಿಂದ ಪ್ರಾಂತ ಮಟ್ಟದವರೆಗೆ ಆಯಾ ಪ್ರಾಂತದ ಜಂಟಿ ನಿಬಂಧಕರು, ಚುನಾವಣಾಧಿಕಾರಿಗಳಾಗಿರುತ್ತಾರೆ. ಪ್ರಾಂತ ಮಟ್ಟ ಮೀರಿದ ಹಾಗೂ ರಾಜ್ಯ ಮಟ್ಟದ ಸಹಕಾರ ಸಂಘಗಳಿಗೆ ಸಹಕಾರ ಸಂಘಗಳ ಜಂಟಿ ನಿಬಂಧಕರು, ಚುನಾವಣಾ ಪ್ರಾಧಿಕಾರ, ಬೆಂಗಳೂರುರವರು ಚುನಾವಣಾಧಿಕಾರಿಗಳಾಗಿರುತ್ತಾರೆ. ಸದರಿ ಅಧಿಕಾರಿಗಳು ನಿಯಮಾನುಸಾರ ರಿಟರ್ನಿಂಗ್ ಅಧಿಕಾರಿಗಳನ್ನು ನೇಮಕಾತಿ ಮಾಡಿ ಸಹಕಾರ ಸಂಘಗಳಿಗೆ/ಬ್ಯಾಂಕುಗಳಿಗೆ ಚುನಾವಣೆ ನಡೆಸಲು ಕ್ರಮಕೈಗೊಳ್ಳಬೇಕಾಗಿರುತ್ತದೆ. |
| ಆ) | ಈ ಜಿಲ್ಲೆಗಳ ಇತರ ಇಲಾಖೆಯ ನೌಕರರು ಲಭ್ಯವಿದ್ದರೂ ಸಹಕಾರ ಇಲಾಖೆಯ ನೌಕರರನ್ನು ಒಂದಕ್ಕಿಂತ ಹೆಚ್ಚು ಸಹಕಾರ ಸಂಘಗಳ ಚುನಾವಣೆಗೆ ರಿಟರ್ನಿಂಗ್ ಅಧಿಕಾರಿಯಾಗಿ ನೇಮಿಸಲಾಗಿದೆಯೇ: ನೇಮಿಸಿದಲ್ಲಿ ಇಂತಹ ನೇಮಕಾತಿಗೆ ಕಾರಣವೇನು: | ದಿನಾಂಕ: 01.01.2024 ರಿಂದ ದಿನಾಂಕ:25.11.2024 ರ ಅಂತ್ಯಕ್ಕೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು 150 ಸಹಕಾರ ಸಂಘಗಳಿಗೆ ಸಹಕಾರ ಇಲಾಖೆಯ ಅಧಿಕಾರಿಗಳು/ನೌಕರರು ರಿಟರ್ನಿಂಗ್ ಅಧಿಕಾರಿಯಾಗಿ ಚುನಾವಣಾ ಕರ್ತವ್ಯ ನಿರ್ವಹಿಸಿರುತ್ತಾರೆ ಹಾಗೂ ಉಡುಪಿ ಜಿಲ್ಲೆಯಲ್ಲಿ ಸದರಿ ಅವಧಿಯಲ್ಲಿ 134 ಸಹಕಾರ ಸಂಘಗಳಿಗೆ ಸಹಕಾರ ಇಲಾಖೆಯ ಅಧಿಕಾರಿ/ನೌಕರರು ರಿಟರ್ನಿಂಗ್ ಅಧಿಕಾರಿಯಾಗಿ ಚುನಾವಣಾ ಕರ್ತವ್ಯ ನಿರ್ವಹಿಸಿರುತ್ತಾರೆ.<br><br>ಸಹಕಾರ ಇಲಾಖೆಯ ಅಧಿಕಾರಿಗಳು ಲಭ್ಯವಿಲ್ಲದಿದ್ದರೆ ಬೇರೆ ಇಲಾಖೆಯ ನೌಕರರನ್ನು ನೇಮಿಸಲಾಗುವುದು. |

| | | |
|---|---|---|
| ಇ) | ಈ ರೀತಿ ನೇಮಿಸಲಾದ ಸಹಕಾರ ಇಲಾಖೆಯ ನೌಕರರು ಚುನಾವಣಾ ಪ್ರಕ್ರಿಯೆಗಾಗಿ ವಸ್ತುಗಳ ಖರೀದಿ ಹಾಗೂ ಚುನಾವಣಾ ಸಿಬ್ಬಂದಿಗಳ ನೇಮಕಾತಿಯಲ್ಲಿ ಅಕ್ರಮ ಎಸಗಿರುವುದು ಇಲಾಖೆಯ ಗಮನಕ್ಕೆ ಬಂದ ಪ್ರಕರಣಗಳಲ್ಲಿ ಅಂತಹ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳೇನು ? | ಜಿಲ್ಲಾ ಚುನಾವಣಾಧಿಕಾರಿಗಳಾದ ಸಹಕಾರ ಸಂಘಗಳ ಉಪ ನಿಬಂಧಕರು ದಕ್ಷಿಣ ಕನ್ನಡ ಜಿಲ್ಲೆ ಮತ್ತು ಉಡುಪಿ ಜಿಲ್ಲೆರವರಿಂದ ರಿಟರ್ನಿಂಗ್ ಅಧಿಕಾರಿಯಾಗಿ ನೇಮಕಾತಿಗೊಂಡ ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ ಒಬ್ಬ ಅಧಿಕಾರಿ ಮತ್ತು ಉಡುಪಿ ಜಿಲ್ಲೆಯಲ್ಲಿನ ಒಬ್ಬ ಅಧಿಕಾರಿ ರವರು ಸಹಕಾರ ಚುನಾವಣಾ ಪ್ರಾಧಿಕಾರದ ಸುತ್ತೋಲೆಗಿಂತ ಅಧಿಕವಾಗಿ ಚುನಾವಣಾ ವೆಚ್ಚವನ್ನು ಸಂಘದಿಂದ ಪಡೆದಿರುವ ಸಂಬಂಧ ಸದರಿಯವರ ವಿರುದ್ಧ ಶಿಸ್ತು ಕ್ರಮವಹಿಸುವ ಸಲುವಾಗಿ ಕಾರಣ ಕೇಳುವ ನೋಟೀಸು ಜಾರಿ ಮಾಡಲಾಗಿರುತ್ತದೆ. |
| ಈ) | ಮುಂದಿನ ದಿನಗಳಲ್ಲಿ ಈ ರೀತಿ ಸಹಕಾರಿ ಕಾಯ್ದೆಯನ್ವಯ ಕ್ರಮ ಪ್ರಕಾರವಾಗಿ ಸಹಕಾರಿ ಸಂಘಗಳ/ಬ್ಯಾಂಕುಗಳ ಚುನಾವಣೆ ನಡೆಸಲು ಯಾವ ರೀತಿಯ ಕ್ರಮಕೈಗೊಳ್ಳಲಾಗುವುದು? | ಈಗಾಗಲೇ ಸಹಕಾರ ಚುನಾವಣಾ ಪ್ರಾಧಿಕಾರದಿಂದ ಚುನಾವಣಾ ವೆಚ್ಚಗಳಿಗೆ ಸಂಬಂಧಿಸಿದಂತೆ ಆದೇಶ/ಸುತ್ತೋಲೆಗಳನ್ನು ಹೊರಡಿಸಲಾಗಿರುತ್ತದೆ ಹಾಗೂ ಜಿಲ್ಲೆಯಲ್ಲಿನ ಸಹಕಾರ ಸಂಘಗಳ ಚುನಾವಣೆಗೆ ಇತರೆ ಇಲಾಖೆಗಳ ಅಧಿಕಾರಿ/ನೌಕರರುಗಳಿಗೆ ತರಬೇತಿ ನೀಡಿ ರಿಟರ್ನಿಂಗ್ ಅಧಿಕಾರಿಯಾಗಿ ನೇಮಕಾತಿ ಮಾಡಿ ಚುನಾವಣೆ ನಡೆಸುವಂತೆ ಜಿಲ್ಲಾ ಚುನಾವಣಾಧಿಕಾರಿಗಳಿಗೆ ಸೂಚಿಸಲಾಗುವುದು ಸಹಕಾರ ಸಂಘಗಳ ಕಾಯ್ದೆ ಹಾಗೂ ನಿಯಮಾನುಸಾರ ಚುನಾವಣೆ ನಡೆಸಲು ಕ್ರಮವಿಡಲಾಗುತ್ತಿದೆ. |

**ಸಿಒ180 ಸಿಎಲ್‌ಎಮ್ 2024(ಇ)**

K. N. Rajanna

**(ಕೆ.ಎನ್. ರಾಜಣ್ಣ)**
**ಸಹಕಾರ ಸಚಿವರು**